# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

---

**ದಿನಾಂಕ: 31–03–2018**

**ಪ್ರಕಟಣೆಯ ಕೃಪೆಗಾಗಿ............**

ವಿಜಯಪುರ: ಕ್ಷಯರೋಗ ದಿನಾಚರಣೆ ಎನ್ನುವ ಬದಲು ಅದನ್ನು ಕ್ಷಯರೋಗ ನಿರ್ಮೂಲನೆ ದಿನವೆಂದು ಕರೆಯಬೇಕು. ದೇಶದ ಪ್ರತಿ ಮೂಲೆ ಮೂಲೆಗೂ ಜಾಗೃತಿ ಮೂಡಿಸಿ ಕ್ಷಯರೋಗ ನಿರ್ಮೂಲನೆಯಲ್ಲಿ ಎಲ್ಲರೂ ಭಾಗವಹಿಸಬೇಕು. ಅಂದಾಗ ಮಾತ್ರ ಕ್ಷಯರೋಗ ನಿವಾರಣೆಯಾಗಲು ಸಾಧ್ಯ ಎಂದು ಜಿಲ್ಲಾಧಿಕಾರಿ ಡಾ.ಎಸ್.ಬಿ. ಶೆಟ್ಟೆಣ್ಣನವರ ತಿಳಿಸಿದರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಸಮಾಜ ಕಾರ್ಯ ವಿಭಾಗದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರೋಗ್ಯ ಸಂಘ ಹಾಗೂ ಜಿಲ್ಲಾ ಕ್ಷಯರೋಗ ಕೇಂದ್ರ, ಪರಿಷ್ಕೃತ ಕೇಂದ್ರ, ಪರಿಷ್ಕೃತ ರಾಷ್ಟ್ರೀಯ ಕ್ಷಯರೋಗ ನಿಯಂತ್ರಣ, ಯುಥ್ ರೆಡ್‌ಕ್ರಾಸ್ ಯುನಿಟ್ ಇವರ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ವಿಶ್ವ ಕ್ಷಯರೋಗ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ.ಸಬಿಹಾ ಮಾತನಾಡಿ, ದೇಶದಲ್ಲಿ ಮತ್ತು ಸಮಾಜದಲ್ಲಿ ಕ್ಷಯ ರೋಗಿಗಳನ್ನು ಅತ್ಯಂತ ಕೀಳಾಗಿ ಕಾಣುತ್ತಿದ್ದರು. ಅದಕ್ಕಾಗಿ ಈ ದಿನಾಚರಣೆಯ ಮೂಲಕ ಪ್ರತಿಯೊಬ್ಬ ವ್ಯಕ್ತಿಯನ್ನು ಮಾನವೀಯತೆಯಿಂದ ಕಾಣುವುದಾಗಿ ನಿರ್ಧರಿಸಬೇಕು. ರೋಗ ನಿರ್ಮೂಲನೆಯಲ್ಲಿ ಸಮಾಜದ ಅನೇಕ ಗುಂಪುಗಳು, ಸಂಸ್ಥೆಗಳು ಪರೋಕ್ಷವಾಗಿ ಸಹಾಯ ಮಾಡುತ್ತಿವೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥ ಪ್ರೊ.ಎಸ್.ಎ ಖಾಜಿ, ಯೂಥ್ ರೆಡ್‌ಕ್ರಾಸ್ ಘಟಕದ ನೋಡಲ್ ಅಧಿಕಾರಿ ಡಾ.ರಮೇಶ ಸೋನಕಾಂಬಳೆ ಮತ್ತು ಡಾ.ಎನ್.ಎಚ್ ಬಿದರಿ ಉಪಸ್ಥಿತರಿದ್ದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಡಾ.ಕಲಾವತಿ ಸ್ವಾಗತಿಸಿದರು. ಡಾ.ಜೈನಬಿ ಬೀಳಗಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ದೀಪಾ ವಂದಿಸಿದರು.

## ಫೋಟೋ ಕ್ಯಾಪ್ಷನ್:

1) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಸಮಾಜ ಕಾರ್ಯ ವಿಭಾಗದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ

ಇಲಾಖೆ, ಜಿಲ್ಲಾ ಆರೋಗ್ಯ ಸಂಘ ಹಾಗೂ ಜಿಲ್ಲಾ ಕ್ಷಯರೋಗ ಕೇಂದ್ರ, ಪರಿಷ್ಕೃತ ಕೇಂದ್ರ, ಪರಿಷ್ಕೃತ ರಾಷ್ಟ್ರೀಯ ಕ್ಷಯರೋಗ ನಿಯಂತ್ರಣ, ಯೂಥ್ ರೆಡ್‌ಕ್ರಾಸ್ ಯುನಿಟ್ ಇವರ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ವಿಶ್ವ ಕ್ಷಯರೋಗ ದಿನಾಚರಣೆಯ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಎಸ್. ಬಿ ಶೆಟ್ಟೆಣ್ಣನವರ ಮಾತನಾಡಿದರು.

